(1)

ವಿಧಾನ ಪರಿಷತ್ ಸದಸ್ಯರಾದ ಶ್ರೀ ಪುಟ್ಟಣ್ಣ ಇವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

ವಿಷಯ:-

ರಾಜ್ಯದಲ್ಲಿ ಉತ್ತಮವಾಗಿ ನಡೆಯುತ್ತಿರುವ ಅನುದಾನಿತ ಕನ್ನಡ ಮಾಧ್ಯಮ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದಿ:01.01.2016 ರಿಂದ ಪ್ರಸ್ತುತ ಅವಧಿಯವರೆಗೆ ನಿವೃತ್ತಿ, ಮರಣ, ರಾಜೀನಾಮೆ ಇತ್ಯಾದಿ ಕಾರಣಗಳಿಂದ ಹಲವಾರು ಹುದ್ದೆಗಳು ಖಾಲಿ ಇದ್ದು ಸದರಿ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡದೆ ಇರುವುದರಿಂದ ಸದರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಶಿಕ್ಷಣಕ್ಕೆ ತುಂಬಾ ತೊಂದರೆಯಾಗುತ್ತಿದೆ. ವಿಷಯ ಶಿಕ್ಷಕರುಗಳಿಲ್ಲದೆ ಪ್ರತಿವರ್ಷ ಹಲವಾರು ಅನುದಾನಿತ ಶಾಲೆಗಳು ಮುಚ್ಚುತ್ತಿವೆ. ಸದರಿ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಎದುರಾಗಿ ಹಲವಾರು ಶಿಕ್ಷಕರು ಅನುದಾನಕ್ಕೊಳಪಡಿಸಬಹುದೆಂಬ ಭರವಸೆಯಿಂದ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಆದ್ದರಿಂದ ದಿ:01.01.2016 ರಿಂದ ಪ್ರಸ್ತುತ ಸಾಲಿನವರೆಗೆ ನಿವೃತ್ತಿ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಆಗಿರುವ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಬೇಕೆಂಬುದರ ಕುರಿತು ಪ್ರಸ್ತಾಪಿಸಲಾಗಿದೆ.

ಉತ್ತರ:

ರಾಜ್ಯದಲ್ಲಿರುವ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್.ಇ.ಪಿ 2017, ದಿನಾಂಕ:25-09-2018ರಲ್ಲಿ ಅವಕಾಶ ಕಲ್ಪಿಸಲಾಗಿದೆ. ಸರ್ಕಾರದ ಪತ್ರ ಸಂಖ್ಯೆ:ಇಪಿ 59 ಎಸ್‌ಇಎಸ್ 2020, ದಿನಾಂಕ:05.07.2021, ದಿನಾಂಕ:30.06.2022 ಹಾಗೂ ದಿನಾಂಕ:02.08.2022ರಲ್ಲಿ ದಿನಾಂಕ:31.12.2015 ರವರೆಗೆ ಅನುದಾನಿತ ಪ್ರೌಢಶಾಲೆಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾಗಿರುವ ಒಟ್ಟು 2181 ಹುದ್ದೆಗಳನ್ನು ಭರ್ತಿ ಮಾಡಿ ಸಹಾಯಾನುದಾನಕ್ಕೆ ಒಳಪಡಿಸಲು ಸರ್ಕಾರದ ಅನುಮತಿ ನೀಡಲಾಗಿರುತ್ತದೆ.

ರಾಜ್ಯದಲ್ಲಿರುವ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ 144 ಟಿಪಿಯು 2016, ದಿನಾಂಕ:09-02-2017, 12-06-2017, 12-09-2017, 23-07-2021 ಮತ್ತು 02-08-2021ರ ವಿವಿಧ ಆದೇಶಗಳಲ್ಲಿ ನಿಗದಿತ ಕಾರ್ಯಭಾರವಿರುವ ಬೋಧಕ ಹುದ್ದೆಗಳಿಗೆ ಆರ್ಥಿಕ ಮಿತವ್ಯಯವನ್ನು ಸಡಿಲಿಸಿ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.

ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:01.01.2016 ರಿಂದ 31.12.2020ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ ತೀರ್ಮಾನ ಮಾಡಲಾಗುವುದು.

ಸಂಖ್ಯೆ: ಇಪಿ 204 ಎಸ್‌ಇಎಸ್ 2024

(ಎಸ್ ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಇಲಾಖಾ ಸಚಿವರು